**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 465 ಟಿಎನ್ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:13-11-2020.

## ಆದೇಶ

1. ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ: 40-3/2020-ಡಿಎಂ-I(ಎ) ದಿನಾಂಕ:27.10.2020 ಮತ್ತು ದಿನಾಂಕ:30.09.2020ರಲ್ಲಿ ಹೊರಡಿಸಲಾಗಿದ್ದ "ಮರುತೆರವು" ಮಾರ್ಗಸೂಚಿಯನ್ನು ಯಥಾವತ್ತಾಗಿ ದಿನಾಂಕ:30.11.2020ರವರೆಗೆ ಮುಂದುವರೆಸಿದೆ.

2. ಅದರನ್ವಯ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ:ಕಂಇ 158 ಟಿಎನ್ಆರ್ 2020 ದಿನಾಂಕ:28.10.2020ರಲ್ಲಿ ಈಗಾಗಲೇ ಹೊರಡಿಸಿದ ಆದೇಶ ಸಂಖ್ಯೆ:ಕಂಇ 158 ಟಿಎನ್ಆರ್ 2020 ದಿನಾಂಕ:01.10.2020ರಲ್ಲಿನ "ಮರುತೆರವು" ಮಾರ್ಗಸೂಚಿಯನ್ನು ಹಾಗೂ ಮಾರ್ಪಾಡು ಆದೇಶ ಸಂಖ್ಯೆ: ಕಂಇ 158 ಟಿಎನ್ಆರ್ 2020 ದಿನಾಂಕ:07.10.2020ನ್ನು ಯಥಾವತ್ತಾಗಿ ದಿನಾಂಕ:30.11.2020ರ ವರೆಗೆ ಮುಂದುವರೆಸಿ ಆದೇಶಿಸಿರುತ್ತದೆ.

3. 2020ನೇ ನವೆಂಬರ್ 14 ರಿಂದ 16ರವರೆಗೆ ಆಚರಿಸಲ್ಪಡುವ ದೀಪಾವಳಿ ಹಬ್ಬದ ಸಂಬಂಧವಾಗಿ ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 465 ಟಿಎನ್ಆರ್ 2020 ದಿನಾಂಕ:14.10.2020ರಲ್ಲಿ ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಹೊರಡಿಸಿದೆ.

4. ರಾಜ್ಯದಲ್ಲಿ ಕೋವಿಡ್-19 ಸೋಂಕು ಹರಡಿದ್ದು, ಈ ಸೋಂಕನ್ನು ನಿಯಂತ್ರಿಸಲು ರಾಜ್ಯ ಸರ್ಕಾರವು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸುವ ಸಂಬಂಧದಲ್ಲಿ ಇನ್ನೂ ಹೆಚ್ಚಿನ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾದ ಅನಿವಾರ್ಯತೆ ಮತ್ತು ಅವಶ್ಯಕತೆ ಕಂಡುಬಂದು ಇಂತಹ ಪರಿಸ್ಥಿತಿಯಲ್ಲಿ ಸಾರ್ವಜನಿಕರ ಮತ್ತು ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ದೀಪಾವಳಿ ಹಬ್ಬವನ್ನು ಸರಳವಾಗಿ, ಅರ್ಥಗರ್ಭಿತವಾಗಿ, ಭಕ್ತಿಪೂರಕವಾಗಿ ಆಚರಿಸುವ ಸಂಬಂಧ ವಿಪತ್ತು ನಿರ್ವಹಣಾ ಅಧಿನಿಯಮ, 2005ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, 2020ನೇ ನವೆಂಬರ್ 14 ರಿಂದ 16ರವರೆಗೆ ಆಚರಿಸಲಾಗುವ ದೀಪಾವಳಿ ಹಬ್ಬದ ಸಂಬಂಧವಾಗಿ ದಿನಾಂಕ:14.10.2020ರಂದು ಹೊರಡಿಸಿದ ಆದೇಶ ಸಂಖ್ಯೆ:ಕಂಇ 465 ಟಿಎನ್ಆರ್ 2020ನ್ನು ಮತ್ತು ಅದರೊಂದಿಗಿನ ಮಾರ್ಗಸೂಚಿಯನ್ನು ದಿನಾಂಕ: 06.11.2020ರ ಆದೇಶದಲ್ಲಿ ಮಾರ್ಪಡಿಸಿ ದಿನಾಂಕ:07.11.2020 ರಿಂದ 16.11.2020ರವರೆಗೆ ಹಸಿರು ಪಟಾಕಿಗಳನ್ನು ಮಾತ್ರ ಪಟಾಕಿ ಮಾರಾಟಗಾರರಿಂದ ಮಾರಾಟ ಮಾಡಲು ಮತ್ತು ಸಾರ್ವಜನಿಕರಿಂದ ಹಸಿರು ಪಟಾಕಿಗಳನ್ನು ಮಾತ್ರ ಹಚ್ಚಲು ಅನುಮತಿಸಲಾಗಿದೆ.

5. ಆದೇಶ ಸಂಖ್ಯೆ:ಕಂಇ 465 ಟಿಎನ್ಆರ್ 2020 ದಿನಾಂಕ:12.11.2020ರಲ್ಲಿ 'ಹಸಿರು ಪಟಾಕಿಗಳು' ಎಂದರೆ ಏನೆಂಬುದರ ಬಗ್ಗೆ ಸಾರ್ವಜನಿಕರಿಗೆ ಮನದಟ್ಟು ಮಾಡಲು ಮತ್ತು ಖರೀದಿಗೆ ಗಮನಹರಿಸಲು ವಿವರಣೆಗಳನ್ನು ಹೊರಡಿಸಲಾಗಿದೆ. ಈ ವಿವರಣೆಗಳಲ್ಲಿ 'ಹಸಿರು ಪಟಾಕಿ'ಗಳಲ್ಲಿನ ಖರೀದಿಗೆ ಗಮನಿಸಬೇಕಾದ ಚಿಹ್ನೆ, ರಾಷ್ಟ್ರೀಯ ಪ್ರಮಾಣ ಪತ್ರ ಮತ್ತು ರಾಸಾಯನಿಕ ಬಳಕೆಗಳ ಬಗ್ಗೆ ತಿಳಿಸಲಾಗಿದೆ.

...2

6. ಪ್ರಸ್ತುತ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ 'ಹಸಿರು ಪಟಾಕಿ' ಸಂಬಂಧವಾಗಿ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿ ಸಂಖ್ಯೆ:12629/2020 ದಾಖಲಾಗಿದ್ದು, ಸದರಿ ರಿಟ್ ಅರ್ಜಿಯ ಬಗ್ಗೆ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:13.11.2020 ರಂದು ಈ ಕೆಳಕಂಡಂತೆ ನಿರ್ದೇಶನವನ್ನು ನೀಡಿದೆ;

(ಅ) ರಾಜ್ಯದ ನಗರ ಪಾಲಿಕೆಗಳು ಮತ್ತು ಪೊಲೀಸ್ ಇಲಾಖೆಯು ಸಂಬಂಧಪಟ್ಟ ಪ್ರಾಧಿಕಾರಗಳು ಸರ್ಕಾರದ ಆದೇಶ ದಿನಾಂಕ:06.11.2020, 10.11.2020 ಮತ್ತು 11.12.2020ನ್ನು ಕಡ್ಡಾಯವಾಗಿ ಜಾರಿಗೊಳಿಸುವುದು.

(ಆ) ಪಟಾಕಿ ಮಾರಾಟಗಾರರ ಅಂಗಡಿಗಳಿಗೆ ಭೇಟಿ ನೀಡಿ CSIR ಮತ್ತು NEERI ಪ್ರಮಾಣಿಕೃತ ಹಸಿರು ಪಟಾಕಿಗಳನ್ನು ಮಾತ್ರ ಮಾರಾಟ ಮಾಡುತ್ತಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳತಕ್ಕದ್ದು.

(ಇ) ರಾಜ್ಯ ಸರ್ಕಾರವು ಕೂಡಲೇ ದೂರದರ್ಶನ, ಆಕಾಶವಾಣಿ, ಸಾಮಾಜಿಕ ಜಾಲತಾಣ ಮತ್ತು ಇತರೆ ಮಾಧ್ಯಮಗಳ ಮುಖಾಂತರ ಸಾರ್ವಜನಿಕರು ಕಡ್ಡಾಯವಾಗಿ ದಿನಾಂಕ:12.11.2020ರ ಸರ್ಕಾರದ ವಿವರಣೆಯಲ್ಲಿರುವಂತೆ ಹಸಿರು ಪಟಾಕಿಗಳನ್ನು ಮಾತ್ರ ಹಚ್ಚಲು ಎಚ್ಚರಿಕೆ ನೀಡಲು ವ್ಯಾಪಕ ಪ್ರಚಾರ ಮಾಡುವುದು.

(ಈ) ಪೊಲೀಸ್ ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿಯು ಶಬ್ಧ ಮಾಲಿನ್ಯವನ್ನು ತಡೆಗಟ್ಟಲು ಮತ್ತು ಯಾವುದೇ ಕಾರಣಕ್ಕೂ ನಿಯಮದ ವ್ಯಾಪ್ತಿ ಮೀರಿ ಪಟಾಕಿಗಳ ಶಬ್ಧ ಹೆಚ್ಚಾಗಿ ಹೊಮ್ಮದಂತೆ ಕ್ರಮವಹಿಸಿ ಇದನ್ನು ಉಲ್ಲಂಘಿಸಿದವರ ವಿರುದ್ಧ ಕಟ್ಟು ನಿಟ್ಟಿನ ಕ್ರಮವಹಿಸತಕ್ಕದ್ದು.

(ಉ) ಯಾವುದೇ ಕಾರಣಕ್ಕೂ ನಿಯಮ ಉಲ್ಲಂಘಿಸುವವರ ಸಹಾನುಭೂತಿ ತೋರತಕ್ಕದ್ದಲ್ಲ.

(ಊ) ರಾಷ್ಟ್ರೀಯ ಹಸಿರು ನ್ಯಾಯಾಧಿಕರಣದ ದಿನಾಂಕ:09.11.2020ರ ಆದೇಶವನ್ನು ಕಡ್ಡಾಯವಾಗಿ ಜಾರಿಗೊಳಿಸತಕ್ಕದ್ದು.

7. ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು ನೀಡಿರುವ ಮೇಲಿನ ನಿರ್ದೇಶನವನ್ನು ಮಹಾನಗರ ಪಾಲಿಕೆಗಳ ಆಯುಕ್ತರು, ನಗರ ಪಾಲಿಕೆ, ಪೊಲೀಸ್ ಆಯುಕ್ತರು, ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಇತರೆ ಇಲಾಖಾ ಮುಖ್ಯಸ್ಥರುಗಳು ಹಾಗೂ ಇಲಾಖಾ ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸತಕ್ಕದ್ದು.

8. ಅನುಷ್ಠಾನಗೊಳಿಸಿದ ಬಗ್ಗೆ ಸಂಬಂಧಪಟ್ಟ ಎಲ್ಲಾ ಪ್ರಾಧಿಕಾರಗಳು ದಿನಾಂಕ:19.11.2020ರ ಸಂಜೆ 5:00 ಗಂಟೆಯೊಳಗಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರಿಗೆ ತಪ್ಪದೇ ವರದಿ ಸಲ್ಲಿಸತಕ್ಕದ್ದು.

13/11/20

**(ಟಿ.ಎಂ. ವಿಜಯ್ ಭಾಸ್ಕರ್)**
ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.